# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
# ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)
## ವಾರ್ಡ್ ಸಮಿತಿ ಸಭೆ, ದಿನಾಂಕ:06-03-2021 ರ ಸಭಾ ನಡವಳಿ

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/12/20-21

ದಿನಾಂಕ: 06-03-2021 ರಂದು ಬೆಳ್ಳಿಗೆ 11.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri. Ravi Waddar | A E E. Pulakeshi Nagar Sub-Division |
| 3. | Sri.Nagaraj | Work Inspector Ward No.47 |
| 4. | Sri. Kumar | Street Lights (Incharge) |
| 5. | Sri.Akram Nawaz | BWSSB |
| 6. | Smt. Suguna | Revenue Department |
| 7. | Sri Nagaraj | Tax Inspector |
| 8. | Sri Prasad | Garbage I/C |
| 9. | Sri. Venkatesh | Horticulture Dept |
| 10. | Sri. Suresh | Ward Committee Member |
| 11. | Sri. Purushotham | Ward Committee Member |
| 12. | Sri. Ahemed Husian | Ward Committee Member |
| 13. | Sri. Madhi | Ward Committee Member |
| 14. | Sri. Chand pasha | Ward Committee Member |
| 15. | Sri. Syed Ansar Pasha | Ward Committee Member |
| 16. | Sri. Prasanna | Ward Committee Member |
| 17. | Sri.Rajan | Mother Foundation of India |

ಶ್ರೀ. **ಎಸ್.ವಿಶ್ವನಾಥ** ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

- ದಿನಾಂಕ : 06-03-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ಮೋದಿ ಗಾರ್ಡನ್, 6ನೇ ಅಡ್ಡರಸ್ತೆ, ಬಂಗಾರಗಿರಿ ನಗರ ಹಾಗೂ ಮೋದಿ ಗಾರ್ಡನ್ ಸ್ಲಮ್ ಬಳಿ ಕೆಲವು ಸಾರ್ವಜನಿಕರು ತಮ್ಮ ಶೌಚಾಲಯಗಳಿಂದ ಪೈಪ್‌ಲೈನ್ ಸಂಪರ್ಕವನ್ನು ಯುಜಿಡಿ ಗೆ ನೀಡದೇ ನೇರವಾಗಿ ಮಳೆನೀರು ಗಾಲುವೆಗೆ ಸಂಪರ್ಕ ಕಲ್ಪಿಸಿರುವುದಾಗಿ ಸಾರ್ವಜನಿಕರು ತಿಳಿಸಿದ್ದು, ಇದರಿಂದ ಮಳೆನೀರು ಗಾಲುವೆಯಲ್ಲಿ ಹೆಚ್ಚಿನ ಪ್ರಮಾಣದ ಹೂಳು ತುಂಬಿ ಮಳೆಗಾಲದಲ್ಲಿ ನೀರು ಕಾಲುವೆಯಿಂದ ಹೊರಬಂದು ರಸ್ತೆಯ ಮೇಲೆ ಹರಿಯುತ್ತಿರುವುದಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರು ತಿಳಿಸಿರುತ್ತಾರೆ. ಆದ್ದರಿಂದ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸ್ಥಳ ಪರಿಶೀಲಿಸಿ ಸಂಬಂಧಪಟ್ಟ ಸಾರ್ವಜನಿಕರಿಗೆ ಸೂಚನೆ ನೀಡುವಂತೆ ಹಾಗೂ ಅಗತ್ಯ ಕ್ರಮ ಕೈಗೊಳ್ಳುವಂತೆ ಈ ಹಿಂದಿನ ಸಭೆಯಲ್ಲಿ ಸೂಚಿಸಲಾಗಿತ್ತು. ಅದರಂತೆ ಸದರಿ ಸ್ಥಳವನ್ನು ಪರಿಶೀಲಿಸಲಾಗಿ ಮೇಲ್ಕಂಡ ಸ್ಥಳಕ್ಕೆ ಸಂಬಂಧಪಟ್ಟ ಪಕ್ಕದ

ವಾರ್ಡ್‌ನ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ ಮಾಹಿತಿ ನೀಡಿರುವುದಾಗಿ ತಿಳಿಸಿರುತ್ತಾರೆ.

2. ವಾರ್ಡ್ ನಂ.47 ರ ವ್ಯಾಪ್ತಿಯಲ್ಲಿ ಹೆಚ್ಚುವರಿ ಮಾರ್ಷಲ್‌ಗಳನ್ನು ನಿಯೋಜಿಸಲು ಸಂಬಂಧಪಟ್ಟ ಮೇಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ವಿಲೇವಾರಿ ವಿಭಾಗ) ರವರಿಗೆ ಈ ಹಿಂದಿನ ಸಭೆಗಳಲ್ಲಿ ಸೂಚಿಲಾಗಿತ್ತು. ಆದರೆ ಈವರೆವಿಗೆ ಹೆಚ್ಚುವರಿ ಮಾರ್ಷಲ್‌ಗಳನ್ನು ನಿಯೋಜಿಸಲಾಗಿಲ್ಲ ಎಂದು ತಿಳಿದು ಬಂದಿದ್ದು, ಹೆಚ್ಚುವರಿ ಮಾರ್ಷಲ್‌ಗಳ ನಿಯೋಜನೆ ಆಗುವವರೆಗೂ ಹಾಲಿ ಕಾರ್ಯನಿರ್ವಹಿಸುತ್ತಿರುವ ಮಾರ್ಷಲ್ ಗೆ ಉರ್ದು ಶಾಲೆಯ ಬಳಿ ಕಸ ವಿಲೇವಾರಿ ಆದ ನಂತರ ಪುನಃ ಕಸ ತಂದು ಸುರಿಯುವವರ ಮೇಲೆ ಗಮನ ಹರಿಸಲು ಹಾಗೂ ಸೂಕ್ತ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಸ.ಕಾ.ಇಂ (ಘ.ತ್ಯಾ.ವಿ) ರವರಿಗೆ ಮತ್ತೊಮ್ಮೆ ಸೂಚಿಸಲಾಯಿತು.

3. ವಾರ್ಡ್ ವ್ಯಾಪ್ತಿಯಲ್ಲಿ ಎನ್.ಪಿ ಪ್ಯಾಕ್ಟರಿ ರಸ್ತೆಯಲ್ಲಿ ಕೆಟ್ಟು ಹೋಗಿರುವ ಬೀದಿ ದೀಪಗಳನ್ನು ದುರಸ್ಥಿ ಪಡಿಸಲು ಸಭೆಯಲ್ಲಿ ಹಾಜರಿದ್ದ ಬೀದಿ ದೀಪಗಳ ಉಸ್ತುವಾರಿ ಶ್ರೀ.ಕುಮಾರ್ ರವರಿಗೆ ಮುಂದಿನ 2 ದಿನಗಳಲ್ಲಿ ದುರಸ್ಥಿ ಪಡಿಸುವಂತೆ ಸೂಚಿಸಲಾಗಿತ್ತು. ಅದರಂತೆ ಸುಮಾರು 45 ಬೀದಿ ದೀಪಗಳನ್ನು ಈಗಾಗಲೇ ದುರಸ್ಥಿ ಪಡಿಸಲಾಗಿದ್ದು, ಇನ್ನುಳಿದ ಸುಮಾರು 100 ಕ್ಕೂ ಹೆಚ್ಚು ಬೀದಿ ದೀಪಗಳನ್ನು ಸರಿಪಡಿಸಲು ಎತ್ತರದ ಏಣಿಯ ಅವಶ್ಯಕತೆ ಇದ್ದು, ಮುಂದಿನ ಒಂದು ವಾರದಲ್ಲಿ ದುರಸ್ಥಿ ಪಡಿಸಲು ಸೂಚಿಸಲಾಯಿತು.

4. ಈದ್ಗಾ ಮೊಹಲ್ಲಾ ಹತ್ತಿರ ಕಾಂಪೌಂಡ್ ಗೋಡೆ ನಿರ್ಮಿಸಲು ವಾರ್ಡ್ ಸಮಿತಿ ಸದಸ್ಯರು ಆಗ್ರಹ ಪಡಿಸಲಾದಂತೆ ಮುಂದಿನ ಒಂದು ತಿಂಗಳ ಅವಧಿಯಲ್ಲಿ ಸದರಿ ಕಾಮಗಾರಿಯನ್ನು ನಿರ್ವಹಿಸುವುದಾಗಿ ಸಭೆಯಲ್ಲಿ ಹಾಜರಿದ್ದ ಸ.ಕಾ.ಇಂ ರವರು ತಿಳಿಸಿರುತ್ತಾರೆ.

5. ವಾರ್ಡ್ ವ್ಯಾಪ್ತಿಯಲ್ಲಿ ಈಗಾಗಲೇ ಕೊರೆಯಲಾಗಿರುವ ಕೊಳವೆ ಬಾವಿಗಳಿಗೆ ಪಂಪು ಮೋಟಾರ್ ಅಳವಡಿಸಲು ಸಾರ್ವಜನಿಕರು ಆಗ್ರಹ ಪಡಿಸಿದ್ದು, ಅದರಂತೆ ಸ.ಕಾ.ಇಂ (ಕಾಮಗಾರಿ ವಿಭಾಗ) ರವರು ಮುಂದಿನ ದಿನಗಳಲ್ಲಿ ಪಂಪು ಮೋಟಾರ್‌ಗಳನ್ನು ಗುತ್ತಿಗೆದಾರರೊಂದಿಗೆ ಚರ್ಚಿಸಿ ಅಳವಡಿಸಲಾಗುವುದೆಂದು ತಿಳಿಸಿರುತ್ತಾರೆ.

6. ಮುಂದಿನ ವಾರ್ಡ್ ಕಮಿಟಿ ಸಭೆಯಲ್ಲಿ ಪೊಲೀಸ್ ಇಲಾಖೆಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಿರುವಂತೆ ಸಂಬಂದಪಟ್ಟವರಿಗೆ ತಿಳಿಸಲು ಸೂಚಿಸಲಾಯಿತು.

7. ಒಂಟಿ ಮನೆಗಳ ನಿರ್ಮಾಣಕ್ಕೆ ಸಂಬಂಧಪಟ್ಟಂತೆ ಸಭೆಯಲ್ಲಿ ಹಾಜರಿದ್ದ ಡಾ॥ ಬಿ.ಆರ್ ಅಂಬೇಡ್ಕರ್ ದಲಿತ ಸಂಘರ್ಷ ಸಮಿತಿ ಪದಾಧಿಕಾರಿಗಳು ಈಗಾಗಲೇ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಾಮಾಜಿಕ ನ್ಯಾಯ ಸಮಿತಿಯ ಅಧ್ಯಕ್ಷರಿಗೆ ಪತ್ರ ಮುಖೇನಾ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಮತ್ತು ಆರ್ಥಿಕವಾಗಿ ದುರ್ಬಲ ವರ್ಗದವರು, ಪೌರಕಾರ್ಮಿಕರು ಹಾಗೂ ಸಫಾಯಿ ಕರ್ಮಚಾರಿ ವರ್ಗದವರು ಹೆಚ್ಚಾಗಿ ವಾಸಿಸುತ್ತಿದ್ದು ಈ ವರ್ಗದ ಜನರಿಗೆ ಒಂಟಿ ಮನೆಗಳ ನಿರ್ಮಿಸುವ ಬಗ್ಗೆ ಅಗತ್ಯ ಕ್ರಮಕ್ಕಾಗಿ ಕೋರಿಕೆ ಸಲ್ಲಿಸಿರುತ್ತಾರೆ. ಅದರಂತೆ ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರು ಈಗಾಗಲೇ ಮೇಲ್ಕಂಡ ವರ್ಗದವರ ಅರ್ಹ ಫಲಾನುಭವಿಗಳನ್ನು ಪರಿಶೀಲಿಸಿ ಅರ್ಹತೆಯ ಮೇರೆಗೆ ಫಲಾನುಭವಿಗಳ ಪಟ್ಟಿಯನ್ನು ತಯಾರಿಸಲು ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರಿಗೆ ಈಗಾಗಲೇ ಸೂಚಿಸಿರುತ್ತಾರೆ. ಅದ್ದರಿಂದ ಒಂಟಿ ಮನೆಗಳಿಗೆ ಸಂಬಂಧಪಟ್ಟಂತೆ ವಾರ್ಡ್ ವ್ಯಾಪ್ತಿಯಲ್ಲಿ ಸಲ್ಲಿಕೆಯಾಗಿರುವ ಅರ್ಹ ಫಲಾನುಭವಿಗಳನ್ನು ಕಂದಾಯ ಇಲಾಖೆಯ ಮೂಲಕ ಪರಿಶೀಲಿಸಿ ಶೀಘ್ರ ಅಗತ್ಯ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು ಸೂಚಿಸಲಾಯಿತು.

8. ಒಂಟಿ ಮನೆಗಳಿಗೆ ಸಂಬಂಧಪಟ್ಟಂತೆ 2018-19ನೇ ಸಾಲಿನಲ್ಲಿ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ ಹಾಗೂ ಅಲ್ಪಸಂಖ್ಯಾತ 355 ಫಲಾನುಭವಿಗಳಿಗೆ ಒಂಟಿ ಮನೆ ನಿರ್ಮಿಸಿಕೊಳ್ಳಲು ಮಂಜೂರಾತಿ ದೊರೆತಿದ್ದು, ಜಾಬ್ ಸಂಖ್ಯೆ ಕೂಡ ನೀಡಲಾಗಿರುತ್ತದೆ. ಆದರೆ ಕೆಲವು ಫಲಾನುಭವಿಗಳ ಹೆಸರುಗಳು ಎರಡು ಬಾರಿ ಪುನರಾವರ್ತಿತವಾಗಿರುವುದರಿಂದ ಜಾಬ್‌ಕೋಡನ್ನು ಇತರೆ ಫಲಾನುಭವಿಗಳ ಹೆಸರಿಗೆ ನೀಡಲು ಹಾಗೂ ಕೆಲವು ಫಲಾನುಭವಿಗಳು ಕಾರಣಾಂತರಗಳಿಂದ ಮನೆ ನಿರ್ಮಿಸಿಕೊಳ್ಳಲು ಸಾಧ್ಯವಾಗದೇ ಇರುವಂತಹ ಫಲಾನುಭವಿಗಳ ಬದಲು ಇತರೆ ಫಲಾನುಭವಿಗಳನ್ನು ಆಯ್ಕೆ ಮಾಡಿ ಬದಲಿ ಜಾಬ್‌ಸಂಖ್ಯೆ ಪಡೆಯಲು ಸೂಚಿಸಲಾಯಿತು.

9. ಡಾ.ಬಿ.ಆರ್. ಅಂಬೇಡ್ಕರ್ ಪಾರ್ಕ್‌ನಲ್ಲಿ ಅಳವಡಿಸಲಾಗಿರುವ ವಿದ್ಯುತ್ ಪರಿವರ್ತಕದ ಸುತ್ತಲು ಸುರಕ್ಷತಾ ದೃಷ್ಟಿಯಿಂದ ತೋಟಗಾರಿಕಾ ಇಲಾಖೆ ವತಿಯಿಂದ ತಾತ್ಕಾಲಿಕವಾಗಿ ಮರಗಳನ್ನು ಕಟ್ಟಲಾಗಿದ್ದು, ಕೆಲವರು ಸದರಿ ಮರಗಳನ್ನು ಕಿತ್ತುಕೊಂಡು ಹೋಗಿರುವುದಾಗಿ ಸಭೆಯಲ್ಲಿ ಹಾಜರಿದ್ದ ಶ್ರೀ ವೆಂಕಟೇಶ್ (ತೋಟಗಾರಿಕೆ ಇಲಾಖೆ) ರವರು ತಿಳಿಸಿದ್ದು ಸ.ಕಾ.ಇಂ. (ಕಾಮಗಾರಿ ಇಲಾಖೆ) ರವರು ಶೀಘ್ರದಲ್ಲಿಯೆ ಚೈನ್‌ಲಿಂಕ್ ತಂತಿ ಬೇಲಿಯನ್ನು ಅನುದಾನ ಲಭ್ಯತೆಯ ಮೇರೆಗೆ ಅಳವಡಿಸುವುದಾಗಿ ತಿಳಿಸಿದ್ದು, ಅಲ್ಲಿಯವರೆಗೆ ತೋಟಗಾರಿಕೆ ಇಲಾಖೆಯ ವತಿಯಿಂದ ತಾತ್ಕಾಲಿಕವಾಗಿ ಮರಗಳನ್ನು ಅಳವಡಿಸಿ ಸಾರ್ವಜನಿಕರು ಹತ್ತಿರ ಸುಳಿಯದಂತೆ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

ಸಹಿ

(ಎಸ್.ವಿಶ್ವನಾಥ)

ಅಧ್ಯಕ್ಷರು (ನೋಡಲ್ ಅಧಿಕಾರಿ)

ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47

**ಪ್ರತಿಯನ್ನು:**

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
07. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.

(ಎಸ್.ವಿಶ್ವನಾಥ)
**ಅಧ್ಯಕ್ಷರು (ನೋಡಲ್ ಅಧಿಕಾರಿ)**
**ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47**